**Akashvani: Bangalore**
**Regional Bulletin In Kannada**
**03.09.2026: 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು**

1. ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿ ಸಂಪುಟ ಸಭೆ; ನೈಸ್ ಯೋಜನೆ ಸಂತ್ರಸ್ತರಿಗೆ ಪರಿಹಾರ ನೀಡುವ ಕುರಿತಂತೆ ಚರ್ಚೆ
2. ಬೆಂಗಳೂರಿನಲ್ಲಿ ೨೦೨೭ರ ಫೆಬ್ರವರಿ ೮ ರಿಂದ ೧೨ರ ವರೆಗೆ ಏರೋ ಇಂಡಿಯಾ ೧೬ನೇ ಆವೃತ್ತಿ; ರಕ್ಷಣಾ ಸಚಿವಾಲಯ ಸ್ಪಷ್ಟನೆ
3. ಮೌಲ್ಯಾಧಾರಿತ ಶಿಕ್ಷಣವೇ ವಿಕಸಿತ ಭಾರತದ ಭದ್ರ ಅಡಿಪಾಯ; ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್
4. ಮೂರನೇ ದಿನಕ್ಕೆ ಕಾಲಿಟ್ಟ ಬಿಜೆಪಿಯ ಬಳ್ಳಾರಿ ಚಲೋ ಪಾದಯಾತ್ರೆ

******

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಸಭೆ ನಡೆಯುತ್ತಿದೆ. ಸಭೆಯಲ್ಲಿ ಪ್ರಮುಖವಾಗಿ ಸಚಿವ ಬಿ. ನಾಗೇಂದ್ರ ರಾಜೀನಾಮೆ, ರಾಜ್ಯದ ಬರ ಪರಿಶೀಲನೆ ಸೇರಿದಂತೆ ಚರ್ಚೆ ನಡೆಯಲಿದೆ. ಸಂಪುಟ ಸಭೆಯಲ್ಲಿ ನೈಸ್ ರಸ್ತೆ ನಿರ್ಮಾಣದ ವೇಳೆ ಪರಿಹಾರ ಸಿಗದ ರೈತರಿಗೆ ಪರಿಹಾರ ನೀಡುವ ಕುರಿತಂತೆ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ನೇತೃತ್ವದಲ್ಲಿ ನಡೆದ ಸಂಪುಟ ಉಪಸಮಿತಿ ವರದಿಯನ್ನು ಮಂಡಿಸಲು ನಿರ್ಧರಿಸಲಾಗಿದೆ.

******

ಏಷ್ಯಾದ ಅತಿದೊಡ್ಡ ವೈಮಾನಿಕ ಪ್ರದರ್ಶನ ಏರೋ ಇಂಡಿಯಾದ ೧೬ನೇ ಆವೃತ್ತಿ ಬೆಂಗಳೂರಿನಲ್ಲಿ ೨೦೨೭ರ ಫೆಬ್ರವರಿ ೮ ರಿಂದ ೧೨ರವರೆಗೆ ನಡೆಯಲಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಯಲಹಂಕದ ವಾಯುನೆಲೆಯಲ್ಲಿ ನಡೆಯಲಿರುವ ಈ ವೈಮಾನಿಕ ಪ್ರದರ್ಶನದಲ್ಲಿ ಪ್ರಮುಖ ಜಾಗತಿಕ ಬಾಹ್ಯಾಕಾಶ ಮತ್ತು ರಕ್ಷಣಾ ಕಂಪನಿಗಳು, ನೀತಿ ನಿರೂಪಕರು, ತಂತ್ರಜ್ಞಾನ ತಜ್ಞರು, ಉದ್ಯಮ ಪಾಲುದಾರರು ಮತ್ತು ರಕ್ಷಣಾ ಪಡೆಗಳ ಸಿಬ್ಬಂದಿ ಭಾಗಿಯಾಗಲಿದ್ದಾರೆ. ಏರೋ ಇಂಡಿಯಾ ೨೦೨೭ಕ್ಕಾಗಿ ವೆಬ್ ಆಧಾರಿತ ಪೋರ್ಟಲ್ ಅಭಿವೃದ್ಧಿಪಡಿಸಲಾಗಿದೆ. ಐದು ದಿನಗಳ ಕಾಲ ನಡೆಯಲಿರುವ ಈ ವೈಮಾನಿಕ ಪ್ರದರ್ಶನಕ್ಕಾಗಿ ವಸ್ತು ಪ್ರದರ್ಶಕರ ನೋಂದಣಿ ಇಂದಿನಿಂದ ಆರಂಭವಾಗಲಿದೆ ಎಂದು ಸಚಿವಾಲಯದ ಪ್ರಕಟಣೆ ತಿಳಸಿದೆ.

******

ಗುಣಮಟ್ಟದ ಶಿಕ್ಷಣ ಮತ್ತು ಮೌಲ್ಯಾಧಾರಿತ ಶಿಕ್ಷಣವೇ ವಿಕಸಿತ ಭಾರತದ ಭದ್ರ ಅಡಿಪಾಯ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ತಿಳಿಸಿದ್ದಾರೆ. ಚಿತ್ರದುರ್ಗದ ಹಿರಿಯೂರಿನಲ್ಲಿ ಕರ್ನಾಟಕ ಪಬ್ಲಿಕ್ ಸ್ಕೂಲ್‌ನಲ್ಲಿ ಹೊಸದಾಗಿ ನಿರ್ಮಿಸಲಾದ ನೂತನ ಶಾಲಾ ಕೊಠಡಿಗಳು ಹಾಗೂ ಪ್ರಾರ್ಥನಾ ಮಂದಿರ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಶಿಕ್ಷಣದ ಉದ್ದೇಶ ಕೇವಲ ಉತ್ತಮ ಅಂಕಗಳಿಸಿ, ಉದ್ಯೋಗ ಪಡೆಯುವುದು ಅಲ್ಲ, ಜ್ಞಾನದೊಂದಿಗೆ ಬುದ್ಧಿವಂತಿಕೆ, ವಿಜ್ಞಾನದೊಂದಿಗೆ ಕರುಣೆ, ಯಶಸ್ಸಿನೊಂದಿಗೆ ಮೌಲ್ಯಗಳು ಹಾಗೂ ಕರ್ತವ್ಯ ಪ್ರಜ್ಞೆಯನ್ನು ಬೆಳೆಸುವುದಾಗಿರಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ಕೃತಕಬುದ್ಧಿಮತ್ತೆ, ರೋಬೋಟಿಕ್ಸ್, ಜೈವಿಕ ತಂತ್ರಜ್ಞಾನ, ನವೀಕರಿಸಬಹುದಾದ ಇಂಧನ, ಬಾಹ್ಯಾಕಾಶ ತಂತ್ರಜ್ಞಾನ ಹಾಗೂ ಡಿಜಿಟಲ್ ತಂತ್ರಜ್ಞಾನದಂತಹ ಕ್ಷೇತ್ರಗಳು ವೇಗವಾಗಿ ಜಗತ್ತನ್ನು ಪರಿವರ್ತಿಸುತ್ತಿದೆ. ಈ ಹಿನ್ನೆಲೆಯಲ್ಲಿ ಶಾಲೆಗಳಲ್ಲಿ ವಿಜ್ಞಾನ ಮಾದರಿಗಳು, ನಾವೀನ್ಯತೆ ಯೋಜನೆಗಳನ್ನು ಉತ್ತೇಜಿಸಬೇಕು ಎಂದು ಕರೆ ನೀಡಿದ್ದಾರೆ.

******

ಮೇಕೆದಾಟು ಯೋಜನೆಯಿಂದ ತಮಿಳುನಾಡಿಗೆ ಯಾವುದೇ ತೊಂದರೆಯಿಲ್ಲ ಎಂದು ಜಲಸಂಪನ್ಮೂಲ ಸಚಿವ ಚಲುವರಾಯಸ್ವಾಮಿ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ನೀರಾವರಿ ಯೋಜನೆಗಳ ಸಮಸ್ಯೆಯ ಬಗ್ಗೆ ಚರ್ಚಿಸಲು ದೆಹಲಿಗೆ ತೆರಳಿದ್ದಾಗಿ ತಿಳಿಸಿದ್ದಾರೆ. ನ್ಯಾಯಾಲಯದ ಹೋರಾಟದ ಮೂಲಕ ತಮಿಳುನಾಡಿಗೆ ೧೨ ಸಾವಿರ ಕ್ಯೂಸೆಕ್ ಬದಲಿಗೆ ೯ ಸಾವಿರ ಕ್ಯೂಸೆಕ್ ಆದೇಶ ಪಡೆದಿರುವುದಾಗಿ ಸಮರ್ಥಿಸಿಕೊಂಡಿದ್ದಾರೆ. ರೈತರ ರಕ್ಷಣೆಯೇ ತಮ್ಮ ಜವಾಬ್ದಾರಿ ಎಂದು ಹೇಳಿದ್ದಾರೆ. ರಾಜ್ಯದ ಅಣೆಕಟ್ಟೆಗಳ ವೆಬ್‌ಸೈಟ್ ಹ್ಯಾಕ್ ಬಗ್ಗೆ ಸೈಬರ್ ಠಾಣೆಯಲ್ಲಿ ದೂರು ದಾಖಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

******

ಕೆಪಿಎಸ್‌ಸಿ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ಅಮಾನತುಗೊಂಡಿರುವ ಕರ್ನಾಟಕ ಲೋಕಾ ಸೇವಾ ಆಯೋಗದ ಅಧ್ಯಕ್ಷ ಸಾಹುಕಾರ್ ಶಿವಶಂಕರಪ್ಪ ಅವರಿಗೆ ಇಂದು ಸಿಐಡಿ ನೋಟಿಸ್ ಜಾರಿ ಮಾಡಿದೆ. ನಾಳೆ ವಿಚಾರಣೆಗೆ ಹಾಜರಾಗುವಂತೆ ನಿರ್ದೇಶನ ನೀಡಿದೆ. ಎರಡನೇ ಬಾರಿ ಸಮನ್ಸ್ ಜಾರಿ ಮಾಡಲಾಗಿದ್ದು, ಈ ಹಿಂದೆ ಸಿಐಡಿ ಅಧಿಕಾರಿಗಳ ಮುಂದೆ ಅವರು ವಿಚಾರಣೆಗೆ ಹಾಜರಾಗಿದ್ದರು. ಪ್ರಕರಣದ ಪ್ರಮುಖ ಆರೋಪಿಗಳಾದ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಮತ್ತು ಆರೋಪಿ, ಬಿಜೆಪಿ ನಾಯಕ ಬಸವರಾಜ್ ಕನ್ನಾಲೆ ಬಂಧನದ ಬಳಿಕ ಎರಡನೇ ಬಾರಿಗೆ ವಿಚಾರಣೆಗೆ ಆಗಮಿಸುವಂತೆ ನೋಟಿಸ್ ನೀಡಿರುವುದು ಮಹತ್ವ ಪಡೆದುಕೊಂಡಿದೆ. ಶಿವಶಂಕರಪ್ಪ ಬಂಧನದಿಂದ ರಕ್ಷಣೆ ಕೋರಿ ಉಚ್ಛ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದು, ಶೀಘ್ರವೇ ತೀರ್ಪು ಪ್ರಕಟಿಸುವ ನಿರೀಕ್ಷೆ ಇದೆ.

******

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಪ್ರಜಾ ಸೇವಾ ಅಭಿಯಾನಕ್ಕೆ ಶನಿವಾರ ರಾಜ್ಯಾದ್ಯಂತ ಚಾಲನೆ ದೊರೆಯಲಿದೆ. ಪ್ರಜಾಸೇವಾ ಅಭಿಯಾನದಡಿ ಬಾಗಿಲಿಗೆ ಬಂತು ಸರ್ಕಾರ ಸೇವೆಗೆ ಇರಲಿ ಸಹಕಾರ ಎಂಬ ಮಹಾತ್ವಕಾಂಕ್ಷೆ ಕಾರ್ಯಕ್ರಮವನ್ನು ಚನ್ನಪಟ್ಟಣದಲ್ಲಿ ಪೌರಾಡಳಿತ ಸಚಿವ ಎಚ್.ಸಿ. ಬಾಲಕೃಷ್ಣ ಹಾಗೂ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕ  ಸಿ.ಪಿ. ಯೋಗೇಶ್ವರ್ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿದೆ. ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಪ್ರಜಾಸೇವಾ ಆಂದೋಲನ ಕಾರ್ಯಕ್ರಮವನ್ನು ಯಾವುದೇ ಲೋಪದೋಷಗಳಿಗೆ ಅವಕಾಶ ನೀಡದಂತೆ ಯಶಸ್ವಿಯಾಗಿ ಆಯೋಜಿಸಲು ಎಲ್ಲಾ ಇಲಾಖೆಗಳ ಅಧಿಕಾರಿಗಳು ಹಾಗೂ ವಿವಿಧ ಸಮಿತಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಕೋಲಾರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್ ಪಿ. ಬಾಗೇವಾಡಿ ಹೇಳಿದ್ದಾರೆ.

******

ಬಿಜೆಪಿಯ 'ಬಳ್ಳಾರಿ ಚಲೋ' ಪಾದಯಾತ್ರೆ ಮೂರನೇ ದಿನಕ್ಕೆ ಕಾಲಿಟ್ಟಿದೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮಾತನಾಡಿ, ಪರಿಶಿಷ್ಟರ ಕಲ್ಯಾಣಕ್ಕಾಗಿ ಮೀಸಲಾದ ಹಣವನ್ನು ಖಾತರಿ ಯೋಜನೆಗಳಿಗೆ ನೀಡಲಾಗುತ್ತಿದೆ ಎಂದು ದೂರಿದ್ದಾರೆ. ರೈತರ ಸಂಕಷ್ಟವನ್ನು ಪರಿಹರಿಸಲು ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದ್ದಾರೆ. ರೈತರು ಎದುರಿಸುತ್ತಿರುವ ಸಮಸ್ಯೆಗಳನ್ನು ಚರ್ಚಿಸಲು ಮತ್ತು ಕೃಷಿ ಬಿಕ್ಕಟ್ಟಿಗೆ ಪರಿಹಾರ ಕಂಡುಕೊಳ್ಳಲು ವಿಧಾನಸಭೆಯ ವಿಶೇಷ ಅಧಿವೇಶನ ಕರೆಯಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ಬಿಜೆಪಿ ಪಾದಯಾತ್ರೆಗೆ ಕಪ್ಪು ಬಾವುಟ ತೋರಿಸುವ ಬದಲು ರೈತರ ಸಮಸ್ಯೆ ಬಗೆಹರಿಸಲಿ ಎಂದು ತಿರುಗೇಟು ನೀಡಿದ್ದಾರೆ.

******

ಮಳೆಯ ಅಭಾವ ಮತ್ತು ಅನಿಶ್ಚಿತ ವಾತಾವರಣದ ನಡುವೆಯೂ ಭವಿಷ್ಯದಲ್ಲಿ  ತೆಂಗು ಅತ್ಯಂತ ಆಶಾದಾಯಕ ಬೆಳೆಯಾಗಲಿದೆ ಎಂದು ದಾವಣಗೆರೆ ಕೃಷಿ ವಿಜ್ಞಾನ ಕೇಂದ್ರದ ತೋಟಗಾರಿಕೆ ವಿಜ್ಞಾನಿ ಡಾ. ಬಸವನಗೌಡ ಎಂ.ಜಿ. ತಿಳಿಸಿದ್ದಾರೆ. 'ವಿಶ್ವ ತೆಂಗು ದಿನಾಚರಣೆ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮೌಲ್ಯವರ್ಧನೆ ಹಾಗೂ ಜಾಗತಿಕ ಮಾರುಕಟ್ಟೆ ಅವಕಾಶಗಳನ್ನು ಬಳಸಿಕೊಳ್ಳುವ ಮೂಲಕ ರೈತರು ಉತ್ತಮ ಆದಾಯ ಗಳಿಸಬಹುದು ಎಂದು ಹೇಳಿದ್ದಾರೆ. ಬರಗಾಲವನ್ನು ತಡೆಯುವ ಅತ್ಯುತ್ತಮ ಸಾಮರ್ಥ್ಯ ತೆಂಗಿನ ಮರಕ್ಕಿದೆ. ಆದ್ದರಿಂದ ರೈತರು ಕೇವಲ ಅಡಕೆಯನ್ನೇ ನೆಚ್ಚಿಕೊಂಡು ಏಕಬೆಳೆ ಬೆಳೆಯುವ ಬದಲು, ತೆಂಗಿನ ಕೃಷಿಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಸಲಹೆ ನೀಡಿದ್ದಾರೆ.

******

ಗ್ರಾಮೀಣ ಭಾಗದ ಅಂಚೆ ಹಾಗೂ ಹಣಕಾಸು ಸೇವೆಗಳಿಗೆ ತೊಂದರೆಯಾಗುತ್ತಿದ್ದ ಹಿನ್ನೆಲೆಯಲ್ಲಿ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಮನವಿಗೆ ಸ್ಪಂದಿಸಿರುವ ಕೇಂದ್ರ ಸರ್ಕಾರ, ರಾಜ್ಯದ ೬೭ ಗ್ರಾಮೀಣ ಅಂಚೆ ಕಚೇರಿಗಳಿಗೆ ಬಿಎಸ್‌ಎನ್‌ಎಲ್ ಸಿಮ್‌ಗಳನ್ನು ಒದಗಿಸಿ ಸಕ್ರಿಯಗೊಳಿಸಿದೆ. ಉತ್ತರ ಕನ್ನಡ ಜಿಲ್ಲೆಯ ೪೩, ಶಿವಮೊಗ್ಗದ ೨೨ ಹಾಗೂ ಚಿಕ್ಕಮಗಳೂರಿನ ೨ ಗ್ರಾಮೀಣ ಅಂಚೆ ಕಚೇರಿಗಳ ವ್ಯಾಪ್ತಿಯಲ್ಲಿ ಬಿಎಸ್‌ಎನ್‌ಎಲ್ ಹೊರತುಪಡಿಸಿ ಬೇರೆ ಖಾಸಗಿ ನೆಟ್‌ವರ್ಕ್ ಲಭ್ಯವಿರಲಿಲ್ಲ. ಬಿಎಸ್‌ಎನ್‌ಎಲ್ ಸಿಮ್‌ಗಳ ಕೊರತೆಯಿಂದಾಗಿ ಗ್ರಾಮೀಣ ಭಾಗದ ವೃದ್ಧರು, ರೈತರು, ವಿಧವೆಯರು ಹಾಗೂ ವಿಕಲಚೇತನರು ಪಿಂಚಣಿ ಮತ್ತು ಬ್ಯಾಂಕಿಂಗ್ ಸೇರಿದಂತೆ ವಿವಿಧ ಹಣಕಾಸು ಸೇವೆ ಪಡೆಯಲು ತೊಂದರೆ ಅನುಭವಿಸುತ್ತಿದ್ದರು.

******

ನೈರುತ್ಯ ರೈಲ್ವೆಯ ಬೆಂಗಳೂರು ವಿಭಾಗದ ರೈಲ್ವೆ ರಕ್ಷಣಾ ಪಡೆಯು ರೈಲ್ವೆ ಹಳಿಯಲ್ಲಿ ಅತಿಕ್ರಮ ಪ್ರವೇಶವನ್ನು ತಡೆಗಟ್ಟುವ ಹಾಗೂ ಪ್ರಯಾಣಿಕರ ಸುರಕ್ಷತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕಳೆದ ಎರಡು ತಿಂಗಳ ಅವಧಿಯಲ್ಲಿ ಅತಿಕ್ರಮ ಪ್ರವೇಶದ ೨ ಸಾವಿರದ ೩೧೧ ಪ್ರಕರಣಗಳನ್ನು ದಾಖಲಿಸಿಕೊಂಡಿದೆ. ೧೧ ಲಕ್ಷದ ೫೭ ಸಾವಿರ ರೂಪಾಯಿ ದಂಡ ಸಂಗ್ರಹಿಸಲಾಗಿದೆ ಎಂದು ನೈಋತ್ಯ ರೈಲ್ವೆಯ ಬೆಂಗಳೂರು ವಿಭಾಗದ ಸಾರ್ವಜನಿಕ ಸಂಪರ್ಕ ಅಧಿಕಾರಿ ಪ್ರಾಣೇಶ್ ತಿಳಿಸಿದ್ದಾರೆ. ರೈಲ್ವೆ ಹಳಿಯಲ್ಲಿ ಕಾನೂನು ಉಲ್ಲಂಘಿಸುವ ವ್ಯಕ್ತಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

******

ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಉಡುತೊರೆಹಳ್ಳ ಬಳಿ, ನಾಡ ಬಂದೂಕಿನಿಂದ ಕಡವೆಯನ್ನು ಕೊಂದು ಹೊತ್ತೊಯ್ಯುವಾಗ ಅರಣ್ಯ ಸಿಬ್ಬಂದಿಯನ್ನು ನೋಡಿ ಕಳ್ಳಬೇಟೆಗಾರರು ಪರಾರಿಯಾದ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಈ ಬಗ್ಗೆ ಅರಣ್ಯ ಇಲಾಖೆ ಇಂದು ಪ್ರಕಟಣೆ ಮೂಲಕ ಮಾಹಿತಿ ನೀಡಿದೆ. ಉಡುತೊರೆಹಳ್ಳ ಅಣೆಯಕಟ್ಟೆಯ ಹಿನ್ನೀರಿನಲ್ಲಿ ಅರಣ್ಯ ಸಿಬ್ಬಂದಿ ಗಸ್ತು ನಡೆಸುವಾಗ ನಾಲ್ವರು ಬೇಟೆಗಾರರು ನಾಡ ಬಂದೂಕು ಹಿಡಿದು ತಲೆ ಮೇಲೆ ಚೀಲ ಹೊತ್ತು ಬರುವುದನ್ನು ಕಂಡಿದ್ದಾರೆ. ಈ ವೇಳೆ,  ಕಳ್ಳಬೇಟೆಗಾರರು ಚೀಲ ಎಸೆದು ಪರಾರಿಯಾಗಿದ್ದಾರೆ. ಹನೂರು ಅರಣ್ಯ ವಲಯ ಸಿಬ್ಬಂದಿ ಆರೋಪಿಗಳ ಪತ್ತೆಗೆ ಶ್ವಾನದಳ ಬಳಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

******

೧. ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಖಾಸಗಿ ಸಂಸ್ಥೆಯ ತಂತ್ರಜ್ಞಾನದಡಿ ಆಟೋಗಳಿಗೆ ಜಿಪಿಎಸ್ ಅಳವಡಿಸಿದ್ದ ಪ್ರಾಯೋಗಿಕ ಯೋಜನೆ ಯಶಸ್ವಿಯಾಗಿದೆ ಎಂದು ಆಯುಕ್ತ ಕೆ.ಎನ್. ರಮೇಶ್ ತಿಳಿಸಿದ್ದಾರೆ.

೨. ಯಾದಗಿರಿ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಜಾಬ್‌ಕಾರ್ಡ್ ಹೊಂದಿರದ ಕುಟುಂಬಗಳಿಗೆ ಹೊಸ ಜಾಬ್‌ಕಾರ್ಡ್ ವಿತರಿಸಲು ಸರ್ಕಾರ ಸೂಚನೆ ನೀಡಿರುವ ಹಿನ್ನೆಲೆಯಲ್ಲಿ, ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಒಂದು ತಿಂಗಳ ಕಾಲ ಜಾಬ್‌ಕಾರ್ಡ್ ಮೇಳ ಅಭಿಯಾನ ಹಮ್ಮಿಕೊಳ್ಳಲಾಗಿದೆ.

***END***